Akashvani : Bangalore
Regional Bulletin In Kannada
15.10.2026 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

15.10.2026 / 18.40 hrs

---

ಮುಖ್ಯಾಂಶಗಳು

- ಮೀಸಲಾತಿ ಹೆಚ್ಚಳ ರದ್ದುಪಡಿಸಿರುವ ಹೈಕೋರ್ಟ್ ತೀರ್ಪಿನ ವಿರುದ್ಧ ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಲು ಸರ್ಕಾರ ನಿರ್ಧಾರ
- ಹತ್ಯೆ ಪ್ರಕರಣದ ಕ್ಷಮಾದಾನ ಮನವಿ ತಿರಸ್ಕರಿಸಲು ರಾಜ್ಯಪಾಲರಿಗೆ ಶಿಫಾರಸು; ಸಂಪುಟ ಸಭೆಯಲ್ಲಿ ಮಹತ್ವದ ತೀರ್ಮಾನ
- ನೂತನ ರಾಜ್ಯಪಾಲರಾಗಿ ಲೋಕಭವನದಲ್ಲಿ ನಾಳೆ ಡಾ. ಸುಧಾ ಯಾದವ್ ಪ್ರಮಾಣವಚನ ಸ್ವೀಕಾರ
- ಐಎನ್‌ಎಸ್ ಕದಂಬ ನೌಕಾನೆಲೆಯಲ್ಲಿ ನಾಳೆ ಭಾರತೀಯ ನೌಕಾಪಡೆಗೆ 'ಸಮರ್ಥಕ್' ಹಡಗು ಸೇರ್ಪಡೆ; ಉಪರಾಷ್ಟ್ರಪತಿ ಲೋಕಾರ್ಪಣೆ
- ಇದೇ 24 ರಿಂದ 27ರ ವರೆಗೆ ಯುನೆಸ್ಕೋ ತಂಡದಿಂದ ವಿಶ್ವವಿಖ್ಯಾತ ಹಂಪಿಯ ಸ್ಮಾರಕಗಳ ಪರಿಶೀಲನೆ

---

ಪರಿಶಿಷ್ಟರ ಮೀಸಲಾತಿ ಹೆಚ್ಚಳ ರದ್ದುಪಡಿಸಿರುವ ಹೈಕೋರ್ಟ್ ತೀರ್ಪಿನ ವಿರುದ್ಧ ಸರ್ವೋಚ್ಚ ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಲು ಇಂದು ನಡೆದ ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ.

ಈ ಕುರಿತಂತೆ ಸುಪ್ರೀಂಕೋರ್ಟ್‌ನಲ್ಲಿ ವಿಶೇಷ ಅನುಮತಿ ಅರ್ಜಿ ಸಲ್ಲಿಸುವ ಕುರಿತು ತೀರ್ಮಾನ ಕೈಗೊಳ್ಳಲಾಗಿದೆ ಎಂದು ಸಭೆಯ ಬಳಿಕ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಮಾಹಿತಿ ನೀಡಿದ್ದಾರೆ.

ರಾಜ್ಯದಲ್ಲಿ ಹೊಸದಾಗಿ 9 ತಾಲೂಕುಗಳನ್ನು ಬರಪೀಡಿತ ತಾಲೂಕುಗಳೆಂದು ಘೋಷಿಸಲಾಗಿದ್ದು, ಒಟ್ಟು 226 ತಾಲೂಕುಗಳನ್ನು ಬರಪೀಡಿತ ಎಂದು ಗುರುತಿಸಲಾಗಿದೆ. ಮುಂದಿನ ಒಂದೆರಡು ದಿನಗಳಲ್ಲಿ ಮನವಿ ಪತ್ರ ಪೂರ್ಣಗೊಳ್ಳಲಿದ್ದು, ಕೇಂದ್ರಕ್ಕೆ ಸರ್ವಪಕ್ಷ ನಿಯೋಗ ಕೊಂಡೊಯ್ಯಲು ತೀರ್ಮಾನಿಸಲಾಗಿದೆ ಎಂದು ತಿಳಿಸಿದ್ದಾರೆ.

ಬರದಿಂದ ಉಂಟಾಗಿರುವ ನಷ್ಟ ಈಗಾಗಲೇ ಸುಮಾರು 46 ಸಾವಿರ ಕೋಟಿಯಷ್ಟಿದೆ ಎಂದು ಅಂದಾಜು ಮಾಡಲಾಗಿದೆ. ಅಂತಿಮ ಲೆಕ್ಕಾಚಾರದಲ್ಲಿ ನಷ್ಟದ ಪ್ರಮಾಣದ 60 ಸಾವಿರ ಕೋಟಿಯಿಂದ 70 ಸಾವಿರ ಕೋಟಿಯವರೆಗೆ ತಲುಪಬಹದು ಎಂದು ಅಭಿಪ್ರಾಯಪಟ್ಟಿದ್ದಾರೆ.

---

ರಾಜ್ಯಾದ್ಯಂತ ಭಾರೀ ಸಂಚಲನ ಸೃಷ್ಟಿಸಿದ್ದ ರಿಂಗ್ ರೋಡ್ ಶುಭಾ ಕೊಲೆ ಪ್ರಕರಣದ ಅಪರಾಧಿಗಳ ಕ್ಷಮಾದಾನ ಅರ್ಜಿಯನ್ನು ಮುಖ್ಯಮಂತ್ರಿ ನೇತೃತ್ವದಲ್ಲಿ ನಡೆದ ಸಂಪುಟ ಸಭೆ ತಿರಸ್ಕರಿಸಿದೆ.

ಭಾವಿ ಪತಿ ಗಿರೀಶ್ ಕೊಲೆ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆ ಅನುಭವಿಸುತ್ತಿರುವ ಶುಭಾ ಹಾಗೂ ಡಿ. ಅರುಣ್ ವರ್ಮಾ, ಕ್ಷಮಾದಾನ ಕೋರಿ, ರಾಜ್ಯಪಾಲರ ಮುಂದೆ ಅರ್ಜಿ ಸಲ್ಲಿಸಿರುವ ಬಗ್ಗೆ ಸಭೆಯಲ್ಲಿ ಚರ್ಚೆ ನಡೆಸಿ, ಈ ನಿರ್ಧಾರ ಕೈಗೊಳ್ಳಲಾಗಿದೆ.

ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಗೃಹ ಸಚಿವ ಪ್ರಿಯಾಂಕ್ ಖರ್ಗೆ, ಕ್ಷಮಾದಾನ ಮನವಿಯನ್ನು ತಿರಸ್ಕರಿಸುವಂತೆ ರಾಜ್ಯಪಾಲರಿಗೆ ಶಿಫಾರಸು ಮಾಡಲು ನಿರ್ಧರಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

---

ರಾಜ್ಯದ ನೂತನ ರಾಜ್ಯಪಾಲರಾಗಿ ನೇಮಕಗೊಂಡಿರುವ ಹರಿಯಾಣ ಮೂಲದ ಡಾ.ಸುಧಾ ಯಾದವ್ ನಾಳೆ ಪ್ರಮಾಣವಚನ ಸ್ವೀಕರಿಸಲಿದ್ದಾರೆ.

ಲೋಕಭವನದಲ್ಲಿ ಬೆಳಗ್ಗೆ 10 ಗಂಟೆಗೆ ಏರ್ಪಡಿಸಿರುವ ಸರಳ ಸಮಾರಂಭದಲ್ಲಿ ನೂತನ ರಾಜ್ಯಪಾಲರಿಗೆ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ವಿಭುಬಖ್ರು, ಪ್ರಮಾಣವಚನ ಬೋಧಿಸಲಿದ್ದಾರೆ.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ನಿಕಟಪೂರ್ವ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್, ಸಂಪುಟದ ಸಚಿವರು, ಪ್ರತಿಪಕ್ಷಗಳ ನಾಯಕರು ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

---

ಭಾರತೀಯ ನೌಕಾಪಡೆಗೆ ನಾಳೆ ಸ್ವದೇಶಿ ನಿರ್ಮಿತ ಬಹುಪಯೋಗಿ ಹಡಗು 'ಸಮರ್ಥಕ್' ಸೇರ್ಪಡೆಯಾಗಲಿದೆ. ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಕಾರವಾರದ ಐಎನ್‌ಎಸ್ ಕದಂಬ ನೌಕಾನೆಲೆಯಲ್ಲಿ ಲೋಕಾರ್ಪಣೆಗೊಳಿಸಲಿದ್ದಾರೆ.

ಕೇಂದ್ರ ಸರ್ಕಾರದ 'ಮೇಕ್ ಇನ್ ಇಂಡಿಯಾ' ಉಪಕ್ರಮದಡಿ ಎಲ್ & ಟಿ ಸಂಸ್ಥೆ ದೇಶೀಯವಾಗಿ ವಿನ್ಯಾಸಗೊಳಿಸಿ ನಿರ್ಮಿಸುತ್ತಿರುವ ನಾಲ್ಕು ಬಹು ಉದ್ದೇಶಿತ ನೌಕೆಗಳ ಪೈಕಿ ಇದು ಮೊದಲನೆಯದ್ದಾಗಿದೆ. ಈ ನೌಕೆಯನ್ನು ಮುಖ್ಯವಾಗಿ ಸಮುದ್ರಗಸ್ತು ಮತ್ತು ಕರಾವಳಿ ನಿಗಾ ಕಾರ್ಯಗಳಿಗಾಗಿ ವಿನ್ಯಾಸಗೊಳಿಸಲಾಗಿದೆ.

ಸುಮಾರು 107 ಮೀಟರ್ ಉದ್ದ ಹಾಗೂ 18.6 ಮೀಟರ್ ಅಗಲ ಹೊಂದಿರುವ 'ಸಮರ್ಥಕ್' 3 ಸಾವಿರದ 750 ಟನ್‌ಗಿಂತ ಹೆಚ್ಚಿನ ಸ್ಥಳಾಂತರ ಸಾಮರ್ಥ್ಯ ಹೊಂದಿದೆ. ಗರಿಷ್ಠ 15 ನಾಟ್ಸ್ ವೇಗದಲ್ಲಿ ಸಂಚರಿಸಬಲ್ಲ ಈ ನೌಕೆ, ಶೇಕಡ 75ಕ್ಕಿಂತ ಹೆಚ್ಚು ಸ್ವದೇಶಿ ಅಂಶಗಳನ್ನು ಒಳಗೊಂಡಿದೆ.

ಭವಿಷ್ಯದಲ್ಲಿ ನೌಕಾಪಡೆ ಬಳಸಲಿರುವ ಶಸ್ತ್ರಾಸ್ತ್ರಗಳು, ರೇಡಾರ್‌ಗಳು, ಸಂವೇದಕಗಳು ಮತ್ತು ಇತರ ತಂತ್ರಜ್ಞಾನಗಳನ್ನು ಸಮುದ್ರದಲ್ಲೇ ಪರೀಕ್ಷಿಸಲು ಇದು ಪ್ರಮುಖ ವೇದಿಕೆಯಾಗಲಿದೆ.

ಕಾರವಾರದ ನೌಕಾನೆಲೆಗೆ ಉಪರಾಷ್ಟ್ರಪತಿ ಭೇಟಿ ನೀಡಲಿರುವ ಹಿನ್ನೆಲೆಯಲ್ಲಿ, ಮುನ್ನೆಚ್ಚರಿಕಾ ಕ್ರಮವಾಗಿ ಹಾರವಾಡದಿಂದ ಮಾಜಾಳಿವರೆಗೆ ಸಮುದ್ರ ತೀರದಲ್ಲಿ ಮೀನುಗಾರಿಕೆಯನ್ನು ತಾತ್ಕಾಲಿಕವಾಗಿ ನಿಷೇಧಿಸಲಾಗಿದೆ.

---

ವಿಶ್ವವಿಖ್ಯಾತ ಹಂಪಿಯ ಐತಿಹಾಸಿಕ ಸ್ಮಾರಕಗಳ ಸಂರಕ್ಷಣೆ, ನಿರ್ವಹಣೆ ಹಾಗೂ ವಿಶ್ವ ಪಾರಂಪರಿಕ ತಾಣದ ಮಾರ್ಗಸೂಚಿಗಳ ಪಾಲನೆ ಕುರಿತು ಪರಿಶೀಲಿಸಲು ನಡೆಸಲು ಯುನೆಸ್ಕೊ ತಜ್ಞರ ತಂಡ ಇದೇ 24ರಂದು ಹಂಪಿಗೆ ಭೇಟಿ ನೀಡಲಿದೆ ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯುನೆಸ್ಕೊ ತಂಡ ಇದೇ 24ರಂದು ಹಂಪಿಗೆ ಭೇಟಿ ನೀಡಲಿದ್ದು, ಇದೇ 27ರವರೆಗೆ ಹಂಪಿ ಹಾಗೂ ಸುತ್ತಮುತ್ತಲಿನ ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಿದೆ ಎಂದು ಮಾಹಿತಿ ನೀಡಿದ್ದಾರೆ.

ಅಂತಾರಾಷ್ಟ್ರೀಯ ಪಾರಂಪರಿಕ ತಜ್ಞರಾದ ಕೀನ್ಯಾದ ಜಾರ್ಜ್ ಅಬುಂಗ್, ಜಪಾನ್‌ನ ಇಚಿಡಾ ಶಿಮೊಡ ಹಾಗೂ ವಿಶ್ವ ಪಾರಂಪರಿಕ ತಾಣ ಹೆಚ್ಚುವರಿ ಮಹಾನಿರ್ದೇಶಕಿ ಜಾನ್ವಿ ಶರ್ಮಾ ಅವರನ್ನೊಳಗೊಂಡ ತಂಡವು ಹಂಪಿಯ ಐತಿಹಾಸಿಕ ಸ್ಮಾರಕಗಳು, ದೇವಾಲಯಗಳು ಹಾಗೂ ಪ್ರಾಚೀನ ಅವಶೇಷಗಳ ಸಂರಕ್ಷಣೆಯ ಸ್ಥಿತಿಗತಿಗಳನ್ನು ಅವಲೋಕಿಸಲಿದೆ.

ವಿಜಯನಗರ ಸಾಮ್ರಾಜ್ಯದ ಭವ್ಯ ಇತಿಹಾಸ, ವಾಸ್ತುಶಿಲ್ಪದ ವೈಭವ ಹಾಗೂ ಅಪಾರ ಸಾಂಸ್ಕೃತಿಕ ಪರಂಪರೆಯನ್ನು ಹೊಂದಿರುವ ಹಂಪಿಯ ಸಂರಕ್ಷಣೆಯ ದೃಷ್ಟಿಯಿಂದ ಈ ಭೇಟಿ ಮಹತ್ವ ಪಡೆದುಕೊಂಡಿದೆ.

---

'ಜನ ಸೇವೆಯಿಂದ ದೇಶ ಸೇವೆ' ಎಂಬ ಮಂತ್ರದಡಿ ಜನರ ಏಳಿಗೆಯ ಅಚಲ ಬದ್ಧತೆಯೊಂದಿಗೆ, ಸಾರ್ವಜನಿಕ ಸೇವೆಯ 25 ವರ್ಷಗಳ ಪಯಣವನ್ನು ಪ್ರಧಾನಿ ನರೇಂದ್ರ ಮೋದಿ ಪೂರೈಸಿದ್ದಾರೆ. ಸೇವೆ ಮತ್ತು ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, 2047ರ ವೇಳೆಗೆ 'ವಿಕಸಿತ ಭಾರತ' ಗುರಿ ಸಾಧನೆಯತ್ತ ಸಾಗುತ್ತಿದೆ. ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ 'ಆಯುಷ್ಮಾನ್ ಭಾರತ್ ಪಿಎಂ-ಜೆಎವೈ' ಕುರಿತ ಒಂದು ವರದಿ.

ಬಡ ಮತ್ತು ನಿರ್ಗತಿಕ ಕುಟುಂಬಗಳಿಗೆ ವರ್ಷಕ್ಕೆ 5 ಲಕ್ಷದವರೆಗೆ ನಗದುರಹಿತ ಆರೋಗ್ಯ ವಿಮೆಯನ್ನು ಒದಗಿಸುವ ಉದ್ದೇಶದಿಂದ 2018 ರಲ್ಲಿ ಪ್ರಾರಂಭವಾದ ಆಯುಷ್ಮಾನ್ ಭಾರತ್–ಪಿಎಂ–ಜೆಎವೈ ಯೋಜನೆಯು ಬಡತನ ಮತ್ತು ಆರೋಗ್ಯ ಸೇವೆಯ ನಡುವಿನ ಸಂಬಂಧವನ್ನೇ ಬದಲಾಯಿಸಿದೆ.

ಪ್ರತಿ ಕುಟುಂಬಕ್ಕೆ ವಾರ್ಷಿಕ 5 ಲಕ್ಷದವರೆಗಿನ ನಗದು ರಹಿತ ಚಿಕಿತ್ಸಾ ರಕ್ಷಣೆಯನ್ನು ಒದಗಿಸುವ ಈ ಯೋಜನೆಯು, ಭಾರತದ ಶೇಕಡ 40ರಷ್ಟು ಅತ್ಯಂತ ಬಡ ಜನಸಂಖ್ಯೆಯನ್ನು ಗುರಿಯಾಗಿಸಿಕೊಂಡಿದೆ. ಈ ಕುರಿತಂತೆ ಆಕಾಶವಾಣಿಯೊಂದಿಗೆ ಮಾತನಾಡಿದ ಕೋಲಾರದ ಫಲಾನುಭವಿ ಎಸ್. ಸತೀಶ್ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಮಹತ್ವಾಕಾಂಕ್ಷೆಯ 'ಆಯುಷ್ಮಾನ್ ಭಾರತ್' ಯೋಜನೆಯು ದೇಶದ ಜನತೆಗೆ ಅತ್ಯುತ್ತಮ ಆರೋಗ್ಯ ಸೇವೆಗಳನ್ನು ಒದಗಿಸುತ್ತಿದೆ ಎಂದು ತಿಳಿಸಿದ್ದಾರೆ.

****ಧ್ವನಿ*** ಎಸ್. ಸತೀಶ್

---

ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ದಸರಾ ಸಂಭ್ರಮ ಕಳೆಗಟ್ಟಿದ್ದು, ಈ ಬಾರಿಯ ದಸರಾ ಮಹೋತ್ಸವದ ಪ್ರಮುಖ ಆಕರ್ಷಣೆಯಾಗಿ ಕಂಬಳ ಆಯೋಜಿಸಲಾಗಿದೆ.

ಇದೇ 18 ಮತ್ತು 19ರಂದು ನಡೆಯಲಿರುವ ಈ ಜಾನಪದ ಕ್ರೀಡಾಕೂಟದ ಹಿನ್ನೆಲೆಯಲ್ಲಿ ಕಂಬಳ ಉಪ ಸಮಿತಿಯು ಇಂದು ಕೆಸರಿನ ಟ್ರ್ಯಾಕ್‌ನಲ್ಲಿ ಎರಡು ಜೊತೆ ಕೋಣಗಳನ್ನು ಓಡಿಸುವ ಮೂಲಕ ಪ್ರಾಯೋಗಿಕ ಓಟ ನಡೆಸಿತು. ಪುತ್ತೂರು ಶಾಸಕ ಅಶೋಕ್ ರೈ ಈ ಓಟಕ್ಕೆ ಚಾಲನೆ ನೀಡಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅಶೋಕ್ ರೈ ಕಂಬಳ ಕೂಟದಲ್ಲಿ ಭಾಗವಹಿಸಲು ಈಗಾಗಲೇ 150ಕ್ಕೂ ಹೆಚ್ಚು ಜೊತೆ ಆಯ್ದ ಕೋಣಗಳನ್ನು ಆಯ್ಕೆ ಮಾಡಲಾಗಿದೆ. ಪುತ್ತೂರಿನ ಮಹಾಲಿಂಗೇಶ್ವರ ದೇವಸ್ಥಾನದಿಂದ ಶನಿವಾರ ಬೆಳಿಗ್ಗೆ ಕೋಣಗಳ ಪ್ರಯಾಣ ಆರಂಭವಾಗಲಿದ್ದು, ಕುಶಾಲನಗರದ ಮೂಲಕ ಮೈಸೂರು ತಲುಪಲಿವೆ. ಪ್ರಥಮ ಬಹುಮಾನವಾಗಿ 16 ಗ್ರಾಂ ಚಿನ್ನ ಹಾಗೂ ದ್ವಿತೀಯ ಬಹುಮಾನವಾಗಿ 8 ಗ್ರಾಂ ಚಿನ್ನವನ್ನು ನಿಗದಿಪಡಿಸಲಾಗಿದೆ ಎಂದು ತಿಳಿಸಿದರು.

ಸಾರ್ವಜನಿಕರು ಹಾಗೂ ಪ್ರವಾಸಿಗರು ಕುಟುಂಬ ಸಮೇತರಾಗಿ ಆಗಮಿಸಿ ಕಂಬಳವನ್ನು ಉಚಿತವಾಗಿ ವೀಕ್ಷಿಸಬಹುದಾಗಿದೆ ಎಂದು ಹೇಳಿದ್ದಾರೆ.

---

ನಾಡಹಬ್ಬ ದಸರಾ ಹಿನ್ನಲೆಯಲ್ಲಿ ಐತಿಹಾಸಿಕ ಶ್ರೀರಂಗಪಟ್ಟಣದ ಜಂಬೂ ಸವಾರಿಗೆ ನಟ ಡಾ.ವಿ.ರವಿಚಂದ್ರನ್ ಇಂದು ಪುಷ್ಪಾರ್ಚನೆ ಮಾಡುವ ಮೂಲಕ ಚಾಲನೆ ನೀಡಿದರು.

ಶ್ರೀರಂಗಪಟ್ಟಣದ ಬನ್ನಿಮಂಟಪದ ಬಳಿ 250 ಕೆ.ಜಿ. ತೂಕದ ಮರದ ಅಂಬಾರಿಯಲ್ಲಿದ್ದ ನಾಡ ದೇವತೆ ಚಾಮುಂಡೇಶ್ವರಿಗೆ ಅವರು ಪುಷ್ಪಾರ್ಚನೆ ಮಾಡಿದರು.

ನಾಡದೇವತೆಯನ್ನು ಹೊತ್ತ ಧನಂಜಯ ಆನೆ ರಾಜ ಗಾಂಭೀರ್ಯದಲ್ಲಿ ಬನ್ನಿಮಂಟಪದಿಂದ ರಂಗನಾಥ ದೇಗುಲದವರೆಗೆ ಸಾಗಿತು. ಧನಂಜಯನಿಗೆ ಆನೆಗಳಾದ ಲಕ್ಷ್ಮಿ ಮತ್ತು ರೂಪಾ ಸಾಥ್ ನೀಡಿದವು. 60ಕ್ಕೂ ಹೆಚ್ಚು ಕಲಾ ತಂಡಗಳು, ಹತ್ತಕ್ಕೂ ಹೆಚ್ಚು ಸ್ಥಬ್ಧ ಚಿತ್ರಗಳು ಗಮನ ಸೆಳೆದವು.

---

ನೈಋತ್ಯ ಮುಂಗಾರು ಇಂದು ರಾಜ್ಯದಿಂದ ನಿರ್ಗಮಿಸಿದ್ದು, ದಕ್ಷಿಣ ಒಳನಾಡು ಕರ್ನಾಟಕದಲ್ಲಿ ಈಶಾನ್ಯ ಮುಂಗಾರು ಮಳೆಯ ಚಟುವಟಿಕೆ ಆರಂಭಗೊಂಡಿದೆ. ರಾಜಧಾನಿ ಬೆಂಗಳೂರಿನಲ್ಲಿಂದು ಮಳೆಯಾಗಿದೆ.

ಇಂದು ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ ಜಿಲ್ಲೆಗಳಲ್ಲಿ ಗುಡುಗು ಸಹಿತ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ. ಕರ್ನಾಟಕದ ಉತ್ತರ ಒಳನಾಡು ಜಿಲ್ಲೆಗಳಾದ ರಾಯಚೂರು, ಗದಗ, ಕೊಪ್ಪಳ ಮತ್ತು ಹಾವೇರಿ ಜಿಲ್ಲೆಗಳ ಒಂದೆರಡು ಕಡೆ, ಗುಡುಗು, ಬಿರುಗಾಳಿ ಸಹಿತ ಮಳೆಯಾಗಲಿದೆ.

ದಕ್ಷಿಣ ಒಳನಾಡು ಜಿಲ್ಲೆಗಳಾದ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಕೋಲಾರ, ಚಾಮರಾಜನಗರ, ಮಂಡ್ಯ ಜಿಲ್ಲೆಗಳ ಹಲವೆಡೆ ಗುಡುಗು ಸಹಿತ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ.

______________ ಮುಕ್ತಾಯ ____________